**ಕರ್ನಾಟಕ ಸರ್ಕಾರ**

ಸಂಖ್ಯೆ: ಕಾಇ 5 ಎಲ್‌ಡಬ್ಲ್ಯೂಎ 2017

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸ ಸೌಧ,
ಬೆಂಗಳೂರು,ದಿನಾಂಕ: 02-01-2018.

## ಅಧಿಸೂಚನೆ

ಕೈಗಾರಿಕಾ ವಿವಾದಗಳ ಅಧಿನಿಯಮ 1947ರ (ಕೇಂದ್ರಾಧಿನಿಯಮ 1947ರ ಸಂಖ್ಯೆ:14) ಸೆಕ್ಷನ್ 2 ಖಂಡ (n) ಉಪಖಂಡ (vi)ರ ಮೇರೆಗೆ "**ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ**" ಹಾಗೂ "**ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ**" ಈ ಎರಡೂ ಸಂಸ್ಥೆಗಳನ್ನು ಕ್ರಮವಾಗಿ, ಸರ್ಕಾರದ ಅಧಿಸೂಚನೆ ಸಂಖ್ಯೆ: ಕಾಇ 5 ಎಲ್‌ಡಬ್ಲ್ಯೂಎ 2017, ದಿನಾಂಕ:14-07-2017ರಲ್ಲಿ ದಿನಾಂಕ: 01-07-2017ರಿಂದ ಮುಂದಿನ 6 ತಿಂಗಳ ಅವಧಿಯವರೆಗೆ ಜಾರಿಯಲ್ಲಿರುವಂತೆ ಮತ್ತು ಸರ್ಕಾರದ ಅಧಿಸೂಚನೆ ಸಂಖ್ಯೆ: ಕಾಇ 6 ಎಲ್‌ಡಬ್ಲ್ಯೂಎ 2017, ದಿನಾಂಕ: 14-07-2017ರಲ್ಲಿ ದಿನಾಂಕ: 03-06-2017ರಿಂದ ಮುಂದಿನ 6 ತಿಂಗಳ ಅವಧಿಯವರೆಗೆ ಜಾರಿಯಲ್ಲಿರುವಂತೆ ***"ಸಾರ್ವಜನಿಕ ಉಪಯುಕ್ತ ಸೇವೆ"*** ಎಂಬುದಾಗಿ ಘೋಷಿಸಲಾಗಿತ್ತು.

ಸಾರ್ವಜನಿಕ ಹಿತದೃಷ್ಟಿಯಿಂದ ಸದರಿ ಅವಧಿಗಳನ್ನು ಮುಂದಿನ 6 ತಿಂಗಳ ಅವಧಿಗೆ ವಿಸ್ತರಿಸಲು ಸರ್ಕಾರವು ಪರಿಗಣಿಸಿದೆ. ಆದುದರಿಂದ, ಕೈಗಾರಿಕಾ ವಿವಾದಗಳ ಅಧಿನಿಯಮ 1947 (ಕೇಂದ್ರಾಧಿನಿಯಮ 1947ರ ಸಂಖ್ಯೆ:14) ಕಲಂ 2 ಖಂಡ (n) ಉಪಖಂಡ (vi)ರ ಮೇರೆಗೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, "**ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ**" ಹಾಗೂ "**ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ**" ಈ ಎರಡೂ ಸಂಸ್ಥೆಗಳನ್ನು ***"ಸಾರ್ವಜನಿಕ ಉಪಯುಕ್ತ ಸೇವೆ" ಎಂಬುದಾಗಿ ದಿನಾಂಕ: 01-01-2018 ರಿಂದ ಜಾರಿಗೆ ಬರುವಂತೆ*** ಮುಂದಿನ 6 ತಿಂಗಳ ಅವಧಿಯವರೆಗೆ ವಿಸ್ತರಿಸಿ ಘೋಷಿಸಲಾಗಿದೆ.

**ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ**
**ಮತ್ತು ಅವರ ಹೆಸರಿನಲ್ಲಿ,**

02.01.2018

(ಎಲ್.ಎಸ್. ಶ್ರೀಕಂಠಬಾಬು)
**ಸರ್ಕಾರದ ಉಪ ಕಾರ್ಯದರ್ಶಿ,**
**ಕಾರ್ಮಿಕ ಇಲಾಖೆ.**

ಹೊರಡಿಸಿದೆ
ದಿನಾಂಕ 2/1/2018

**ಇವರಿಗೆ,**

**ಸಂಕಲನಕಾರರು, ಸರ್ಕಾರಿ ಮುದ್ರಣಾಲಯ, ಬೆಂಗಳೂರು ಇವರಿಗೆ, ಸದರಿ ಅಧಿಸೂಚನೆಯನ್ನು ಮುಂದಿನ ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸುವಂತೆ ಹಾಗೂ ಪ್ರಕಟಿಸಿದ 100 ಪ್ರತಿಗಳನ್ನು ಸರ್ಕಾರದ ಕಾರ್ಯದರ್ಶಿಗಳು, ಕಾರ್ಮಿಕ ಇಲಾಖೆ, ಕೊಠಡಿ ಸಂಖ್ಯೆ:414, 4ನೇ ಮಹಡಿ, ವಿಕಾಸಸೌಧ, ಬೆಂಗಳೂರು ಇಲ್ಲಿಗೆ ಸಲ್ಲಿಸುವಂತೆ ಕೋರಲಾಗಿದೆ.**

**ಪ್ರತಿಗಳು:-**

1) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಾರಿಗೆ ಇಲಾಖೆ, ಬಹುಮಹಡಿಗಳ ಕಟ್ಟಡ,
2) ಕಾರ್ಮಿಕ ಆಯುಕ್ತರು, ಕಾರ್ಮಿಕ ಭವನ, ಬನ್ನೇರುಘಟ್ಟ ರಸ್ತೆ, ಬೆಂಗಳೂರು-29.
3) ವ್ಯವಸ್ಥಾಪಕ ನಿರ್ದೇಶಕರು, "**ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ**" ಮತ್ತು "**ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ**" "ಸಾರಿಗೆ ಭವನ", ಕೇಂದ್ರ ಕಛೇರಿ, ಕೆ.ಹೆಚ್. ರಸ್ತೆ, ಶಾಂತಿ ನಗರ, ಬೆಂಗಳೂರು-560 027
4) ಮಾನ್ಯ ಕಾರ್ಮಿಕ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ.
5) ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಕಾರ್ಮಿಕ ಇಲಾಖೆ, ವಿಕಾಸಸೌಧ.
6) ಶಾಖಾ ರಕ್ಷ ಕಡತ/ಹೆಚ್ಚುವರಿ ಪ್ರತಿ.